**Akashvani : Bangalore**
**Regional Bulletin In Kannada**
**16.10.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಸ್ವದೇಶಿ ಕಡಲ ರಕ್ಷಣಾ ವ್ಯವಸ್ಥೆಗಳಿಂದ ರಾಷ್ಟ್ರೀಯ ಭದ್ರತೆ, ಆರ್ಥಿಕ ಪ್ರಗತಿ ಸಾಧ್ಯ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿಮತ**

**೨. ಕಬ್ಬು ಬೆಳೆಗಾರರಿಗೆ ನ್ಯಾಯಯುತ ಲಾಭ ದೊರೆಯುವಂತೆ ಕ್ರಮ; ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭರವಸೆ**

**೩. ನಿಕಟಪೂರ್ವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ವಿಧಾನಸೌಧದಲ್ಲಿ ಸರ್ಕಾರದಿಂದ ಬೀಳ್ಕೊಡುಗೆ**

**೪. ಮೈಸೂರಿನಲ್ಲಿ ದಸರಾ ಕೃಷಿ ವಸ್ತುಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಚಾಲನೆ**

**೫. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ಭಾರತ - ವೆಸ್ಟ್ ಇಂಡೀಸ್ ಟಿ-೨೦ ಪಂದ್ಯ; ಮೆಟ್ರೋ ಸೇವೆಯ ಅವಧಿ ವಿಸ್ತರಣೆ**

**<><*<><>*><>**

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸಮ್ಮುಖದಲ್ಲಿ ಕಾರವಾರದ ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ಭಾರತೀಯ ನೌಕಾಪಡೆಗೆ ಇಂದು ಸ್ವದೇಶಿ ನಿರ್ಮಿತ ಬಹುಪಯೋಗಿ ಹಡಗು 'ಸಮರ್ಥಕ್' ಸೇರ್ಪಡೆಯಾಗಿದೆ. ಈ ವೇಳೆ ಮಾತನಾಡಿದ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ನಡೆಯುತ್ತಿರುವ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳು ಭಾರತೀಯ ನೌಕಾಪಡೆಯ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸಲಿವೆ ಎಂದು ತಿಳಿಸಿದ್ದಾರೆ. ನೌಕಾನೆಲೆಯಲ್ಲಿ ಹಡಗುಗಳ ನಿರ್ವಹಣಾ ಸೌಲಭ್ಯ, ನೌಕಾ ವಾಯುನೆಲೆ ಮತ್ತು ಆಧುನಿಕ ಡಾಕ್‌ಯಾರ್ಡ್ ಸೇರಿದಂತೆ ವಿವಿಧ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ನೌಕಾ ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯ ಯುದ್ಧನೌಕೆಗಳು ಮತ್ತು ಜಲಾಂತರ್ಗಾಮಿ ನೌಕೆಗಳನ್ನು ನೆಲೆಗೊಳಿಸಲು ಹಾಗೂ ನಿರ್ವಹಿಸಲು ಸಾಧ್ಯವಾಗಲಿದೆ. ಇದರಿಂದ ಈ ಭಾಗದಲ್ಲಿ ಆರ್ಥಿಕ ಅವಕಾಶಗಳೂ ಹೆಚ್ಚಾಗಲಿವೆ ಎಂದು ಅವರು ಹೇಳಿದ್ದಾರೆ.

ವಿದೇಶಗಳಿಂದ ರಕ್ಷಣಾ ಉಪಕರಣಗಳನ್ನು ಖರೀದಿಸುವ ರಾಷ್ಟ್ರವಾಗಿದ್ದ ಭಾರತ, ಇಂದು ಅತ್ಯಾಧುನಿಕ ಕಡಲ ರಕ್ಷಣಾ ವ್ಯವಸ್ಥೆಗಳನ್ನು ದೇಶೀಯವಾಗಿ ವಿನ್ಯಾಸಗೊಳಿಸಿ ನಿರ್ಮಿಸುವ ಸಾಮರ್ಥ್ಯ ಬೆಳೆಸಿಕೊಂಡಿದೆ. ಇದು ರಾಷ್ಟ್ರೀಯ ಭದ್ರತೆ, ಆರ್ಥಿಕ ಪ್ರಗತಿ ಮತ್ತು ಕೈಗಾರಿಕಾ ಬೆಳವಣಿಗೆಗೆ ಬಲ ನೀಡುತ್ತದೆ ಎಂದು ತಿಳಿಸಿದ್ದಾರೆ.

<><*<><>*><>

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಪರಿಹಾರ ಕಂಡುಕೊಳ್ಳಲು ಕೇಂದ್ರ ಸರ್ಕಾರ ಸಮಿತಿ ರಚಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬು ಬೆಲೆ ನಿಗದಿ, ಸಕ್ಕರೆ ಉತ್ಪಾದನೆ, ಎಥೆನಾಲ್ ಖರೀದಿ ಹಾಗೂ ರೈತರಿಗೆ ಲಾಭ ವರ್ಗಾವಣೆ ಸೇರಿದಂತೆ ವಿವಿಧ ವಿಷಯಗಳನ್ನು ಸಮಿತಿ ಪರಿಶೀಲಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಬ್ಬಿನ ಬೆಲೆ ಸೇರಿದಂತೆ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಿ, ನ್ಯಾಯಯುತ ಲಾಭ ದೊರೆಯುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ. ಉತ್ತರ ಪ್ರದೇಶ, ಹರಿಯಾಣ, ಪಂಜಾಬ್ ಮತ್ತು ಉತ್ತರಾಖಂಡ ರಾಜ್ಯಗಳಲ್ಲಿ ಕಬ್ಬಿಗೆ ರಾಜ್ಯ ಸಲಹಾ ಬೆಲೆ ನಿಗದಿಪಡಿಸಲಾಗಿದೆ. ಆದರೆ, ರಾಜ್ಯದಲ್ಲಿ ಈ ವ್ಯವಸ್ಥೆ ಜಾರಿಗೊಳಿಸಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಎಥೆನಾಲ್ ಉತ್ಪಾದನೆಯಿಂದ ದೊರೆಯುವ ಆರ್ಥಿಕ ಲಾಭ ರೈತರಿಗೆ ಸಮರ್ಪಕವಾಗಿ ತಲುಪುವಂತೆ ನೋಡಿಕೊಳ್ಳುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಲೋಕಭವನದಲ್ಲಿಂದು ಪ್ರಮಾಣವಚನ ಸ್ವೀಕರಿಸಿದ ಬಳಿಕ ನೂತನ ರಾಜ್ಯಪಾಲರಾದ ಡಾ. ಸುಧಾ ಯಾದವ್, ವಿಧಾನಸೌಧಕ್ಕೆ ಆಗಮಿಸಿದರು. ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ನೂತನ ರಾಜ್ಯಪಾಲರ ಸ್ವಾಗತ ಹಾಗೂ ನಿಕಟಪೂರ್ವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಡಾ.ಸುಧಾ ಯಾದವ್ ಅವರ ಜೊತೆ ಹೊಸ ಉತ್ಸಾಹದೊಂದಿಗೆ ಒಟ್ಟಾಗಿ ಕಾರ್ಯ ನಿರ್ವಹಿಸೋಣ ಎಂದು ಕರೆ ನೀಡಿದರು. ಜನ್ಮದಿನದಂದೇ ಅವರು ರಾಜ್ಯಪಾಲರಾಗಿ ಪ್ರಮಾಣ ವಚನ ಸ್ವೀಕರಿಸಿರುವುದು ವಿಶೇಷ ಎಂದು ತಿಳಿಸಿದರು. ನಿಕಟ ಪೂರ್ವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಐದು ವರ್ಷಗಳ ಕಾಲ ಉತ್ತಮವಾಗಿ ಕಾರ್ಯನಿರ್ವಹಿಸಿದ್ದು, ಸರ್ಕಾರಕ್ಕೆ ಎಲ್ಲಾ ರೀತಿಯ ಸಹಕಾರ ನೀಡಿರುವುದಕ್ಕೆ ಧನ್ಯವಾದ ಸಲ್ಲಿಸಿದರು. ಇದೇ ವೇಳೆ ನಾಡಿನ ಸಂಸ್ಕೃತಿ, ಪರಂಪರೆಯ ಪ್ರತಿಬಿಂಬವಾಗಿರುವ ನಾಡಹಬ್ಬ

ದಸರಾ ಮಹೋತ್ಸವಕ್ಕೆ ಮೈಸೂರಿಗೆ ಆಗಮಿಸಬೇಕು" ಎಂದು ನೂತನ ರಾಜ್ಯಪಾಲರನ್ನು ಆಹ್ವಾನಿಸಿದರು.

<><*<><>*><>

ಮೈಸೂರಿನಲ್ಲಿ ನಾಡಹಬ್ಬ ದಸರಾ ಕಳೆಗಟ್ಟಿದ್ದು, ಕೃಷಿ ವಸ್ತು ಪ್ರದರ್ಶನವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ದೇಶದಲ್ಲಿ ಶೇಕಡ ೪೬ರಷ್ಟು ಉದ್ಯೋಗ ಕೃಷಿಯಿಂದಲೇ ಸೃಷ್ಟಿಯಾಗುತ್ತಿದ್ದು, ಶೇಕಡ ೧೮ರಷ್ಟು ಜಿಡಿಪಿ ಕೃಷಿಯಿಂದ ಬರುವುದರಿಂದ ರಾಷ್ಟ್ರದ ಆರ್ಥಿಕತೆಯಲ್ಲಿ ಕೃಷಿಗೆ ತನ್ನದೇ ಆದ ಮಹತ್ವವಿದೆ ಎಂದು ತಿಳಿಸಿದರು. ಜೆ.ಕೆ.ಮೈದಾನ ಆವರಣದಲ್ಲಿ ರೈತ ದಸರಾ ಅಂಗವಾಗಿ ಆಯೋಜಿಸಿರುವ "ಕೃಷಿ ವಸ್ತು ಪ್ರದರ್ಶನ"ದಲ್ಲಿ ತೋಟಗಾರಿಕೆ, ಕೃಷಿ, ರೇಷ್ಮೆ ಇಲಾಖೆ ಸೇರಿದಂತೆ ೧೯ ವಿವಿಧ ಇಲಾಖೆಗಳ ಮಳಿಗೆಗಳನ್ನು ತೆರೆಯಲಾಗಿದೆ. ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆ ಆಯೋಜಿಸಿರುವ ವಸ್ತುಪ್ರದರ್ಶನದಲ್ಲಿ ೮ ಹಳ್ಳಿಕಾರ್, ೨ ಬಂಡೂರು ಕುರಿ, ೧ ನಾಟಿಕೋಳಿ ಹಾಗೂ ಮುರ್ರಾ ಎಮ್ಮೆಗಳು ಗಮನ ಸೆಳೆಯುತ್ತಿವೆ. ಇನ್ನೊಂದೆಡೆ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಬಿಎಂಶ್ರೀ ಸಭಾಂಗಣದಲ್ಲಿ "ಜನಪದ" ಕವಿಗೋಷ್ಠಿಯನ್ನು ಪ್ರಖ್ಯಾತ ಜಾನಪದ ವಿದ್ವಾಂಸರಾದ ಡಾ.ಪಿ.ಕೆ.ರಾಜಶೇಖರ ಉದ್ಘಾಟಿಸಿದರು. ಮಡಿಕೇರಿಯಲ್ಲೂ ನಾಡಹಬ್ಬ ದಸರಾ ಸಂಭ್ರಮ ಕಳೆಗಟ್ಟಿದ್ದು, ಮಕ್ಕಳ ದಸರಾ ಅಂಗವಾಗಿ ಅನೇಕ ವೈವಿಧ್ಯಮಯ ಸ್ಪರ್ಧೆಗಳು ನಡೆಯಿತು.

<><*<><>*><>

ಬೆಂಗಳೂರಿನ ರಾಮೋಹಳ್ಳಿ ಸಮೀಪದ ಭೀಮನಕುಪ್ಪೆಯಲ್ಲಿ ಅಸ್ಸಾಂ ಭವನ ನಿರ್ಮಿಸಲಾಗಿದ್ದು, ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮಾ ಇಂದು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಅಸ್ಸಾಂನಿಂದ ರಾಜ್ಯಕ್ಕೆ ಶಿಕ್ಷಣ, ವೈದ್ಯಕೀಯ ಚಿಕಿತ್ಸೆ ಹಾಗೂ ವಿವಿಧ ಅಧಿಕೃತ ಕೆಲಸಗಳಿಗಾಗಿ ಆಗಮಿಸುವವರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಈ ಭವನ ನಿರ್ಮಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿರುವ ಅಸ್ಸಾಂ ಮೂಲದ ಜನರಿಗೆ ನೆರವು ಒದಗಿಸುವುದು ಹಾಗೂ ಉಭಯ ರಾಜ್ಯಗಳ ನಡುವಿನ ಸಂಪರ್ಕವನ್ನು ಬಲಪಡಿಸುವುದು ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಭಾರತ ಸರ್ಕಾರದ ವಾರ್ತಾ ಶಾಖೆ, ಬೆಂಗಳೂರು ವತಿಯಿಂದ ನಾಳೆ ಬೆಂಗಳೂರಿನಲ್ಲಿ ವಾರ್ತಾ ಕಾರ್ಯಾಗಾರ ಆಯೋಜಿಸಲಾಗಿದೆ. ಪ್ರೆಸ್ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದ ಪ್ರಧಾನ ಮಹಾ ನಿರ್ದೇಶಕ ಯೋಗೇಶ್ ಕುಮಾರ್ ಬವೇಜಾ, ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ

ನಡೆಸಲಿದ್ದಾರೆ. ಮುದ್ರಣ ಮತ್ತು ನಿಯತ ಕಾಲಿಕೆಗಳ ನೋಂದಣಿ ಕಾಯ್ದೆ-೨೦೨೩ ಮತ್ತು ಪ್ರೆಸ್ ಸೇವಾ ಪೋರ್ಟಲ್ ಕುರಿತು ಅವರು ಮಾಹಿತಿ ನೀಡಲಿದ್ದಾರೆ. ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಜೆ.ಮಂಜುನಾಥ್ ಹಾಗೂ ಸಾರ್ವಜನಿಕ ಸಂಪರ್ಕ ಮತ್ತು ವಾರ್ತಾ ಇಲಾಖೆ ಆಯುಕ್ತರಾದ ಎಂ.ಎನ್ ಅನುಚೇತ್ ಕಾರ್ಯಕ್ರಮದಲ್ಲಿ ಮಾತನಾಡಲಿದ್ದಾರೆ. ಪತ್ರಿಕೆ, ನಿಯತಕಾಲಿಕೆಗಳ ನೋಂದಣಿ, ಶೀರ್ಷಿಕೆ ಪರಿಶೀಲನೆ, ಅರ್ಜಿ ಸಲ್ಲಿಕೆ ಸೇರಿದಂತೆ ಹಲವು ವಿಷಯಗಳ ಕುರಿತು ಸಂವಾದ ನಡೆಯಲಿದೆ.

**<><*<><>*><>**

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಮೇರಾ ಯುವ ಭಾರತ್- ಮೈ ಭಾರತ್' ಕುರಿತ ಒಂದು ವರದಿ. ಭಾರತ ಹದಿನೈದರಿಂದ ಇಪ್ಪತ್ತೊಂಬತ್ತು ವರ್ಷ ವಯಸ್ಸಿನ ಅತಿ ಹೆಚ್ಚು ಯುವ ಜನತೆಯನ್ನು ಹೊಂದಿದೆ. ಯುವ ಜನತೆಗಾಗಿ ಕೇಂದ್ರ ಸರ್ಕಾರ 'ಮೇರಾ ಯುವ ಭಾರತ್' ಸಂಘಟನೆಯನ್ನು ೨೦೨೩ರ ಅಕ್ಟೋಬರ್‌ನಲ್ಲಿ ಸ್ವಾಯತ್ತ ಸಂಸ್ಥೆಯಾಗಿ ಸ್ಥಾಪಿಸಿತು. ಈ ಮೂಲಕ ಒಬ್ಬ ಯುವಕ ಒಮ್ಮೆ ನೋಂದಾಯಿಸಿಕೊಂಡರೆ, ಒಂದೇ ವ್ಯವಸ್ಥೆಯ ಮೂಲಕ ಕೌಶಲ್ಯ ಕಾರ್ಯಕ್ರಮಗಳು, ಸ್ವಯಂಸೇವಾ ಅವಕಾಶಗಳು, ನಾಯಕತ್ವ ತರಬೇತಿ ಮತ್ತು ಸ್ಥಳೀಯ ಅಭಿವೃದ್ಧಿ ಯೋಜನೆಗಳು ಅವರಿಗೆ ತಲುಪಲಿದೆ. ಸುಮಾರು ೧.೫ ಕೋಟಿ ಯುವ ಭಾರತೀಯರು ಈಗಾಗಲೇ ಇದರಲ್ಲಿ ಹೆಸರು ನೋಂದಾಯಿಸಿಕೊಂಡಿದ್ದಾರೆ. ಈ ಮೂಲಕ ಮೇರಾ ಯುವ ಭಾರತ ಅನ್ನು ಯುವ ಭಾಗವಹಿಸುವಿಕೆ, ನಾಯಕತ್ವ ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಪ್ರಬಲ ವೇದಿಕೆಯಾಗಿ ಪರಿವರ್ತಿಸಲಾಗಿದೆ.

**<><*<><>*><>**

ಭಾರತ, ವೆಸ್ಟ್ ಇಂಡೀಸ್ ನಡುವೆ ನಾಳೆ ಕೊನೆಯ ಹಾಗೂ ೫ನೇ ಟಿ-೨೦ ಏಕದಿನ ಸರಣಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಹೈದರಾಬಾದ್‌ನಲ್ಲಿ ನಡೆದ ನಾಲ್ಕನೇ ಟಿ೨೦ ಪಂದ್ಯದ ವೇಳೆ ಅರ್ಷದೀಪ್ ಗಾಯಗೊಂಡ ಹಿನ್ನೆಲೆಯಲ್ಲಿ, ಭುವನೇಶ್ವರ್ ಕುಮಾರ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ತಿಳಿಸಿದೆ. ಈ ನಡುವೆ ಮುನ್ನೆಚ್ಚರಿಕಾ ಕ್ರಮವಾಗಿ ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ಬಿಗಿ

ಭದ್ರತೆ ಕೈಗೊಳ್ಳಲಾಗಿದೆ. ಕ್ರೀಡಾಭಿಮಾನಿಗಳ ಸುಗಮ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಮೆಟ್ರೋ ಸೇವೆಗಳ ಅವಧಿಯನ್ನು ರಾತ್ರಿ ೧ ಗಂಟೆ ೧೫ ನಿಮಿಷದ ವರೆಗೆ ವಿಸ್ತರಿಸಿ, ಆದೇಶ ಹೊರಡಿಸಿದೆ. ಇದೇ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರವನ್ನು ನಿರ್ಬಂಧಿಸಲಾಗಿದೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಸುಮಾರು ೩ ಕೆಜಿ ಚಿನ್ನವನ್ನು ಡಿಆರ್‌ಐ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಪ್ರಯಾಣಿಕರು ಹಾಗೂ ಓರ್ವ ಸಿಬ್ಬಂದಿಯನ್ನು ಬಂಧಿಸಿದ್ದಾರೆ. ಸಿಂಗಾಪುರದಿಂದ ಬೆಂಗಳೂರು ಮೂಲಕ ದುಬೈಗೆ ತೆರಳಲು ಆಗಮಿಸಿದ್ದ ಮೊಹಮದ್ ಅಖಿಲ್ ಹಾಗೂ ದುಬೈನಿಂದ ಬೆಂಗಳೂರು ಮೂಲಕ ಮಾಲ್ಡಿವ್ಸ್‌ಗೆ ತೆರಳುತ್ತಿದ್ದ ಮೊಹಮದ್ ನಾಸಿಕ್ ಬಂಧಿತ ಆರೋಪಿಗಳು.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿ

೧. ಕೋಲಾರ ಜಿಲ್ಲೆಯ ನರಸಾಪುರ ಕೈಗಾರಿಕಾ ಪ್ರದೇಶದ ಟಾಟಾ ಎಲೆಕ್ಟ್ರಾನಿಕ್ಸ್ ಕಂಪನಿಯಲ್ಲಿ ಮಹಿಳಾ ಕಾರ್ಮಿಕರ ಸಾವಿನ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ವಿಜಯಕೃಷ್ಣ ಒತ್ತಾಯಿಸಿದ್ದಾರೆ.

೨. ಗದಗ ಜಿಲ್ಲಾ ಮಟ್ಟದ ಮಾದರಿ ಯುವ ಸಂಸತ್ತು ಪೂರ್ವಭ್ಯಾಸ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದ್ದಾರೆ.

೩. ಚಾಮರಾಜನಗರ ಜಿಲ್ಲಾ ದಸರಾ ಪ್ರಯುಕ್ತ ನಗರದ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಶ್ವಾನ ಪ್ರದರ್ಶನ ನಡೆಯಿತು. ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟಿ ಈ ಪ್ರದರ್ಶನಕ್ಕೆ ಚಾಲನೆ ನೀಡಿದರು.

೪. ಆಗ್ನೇಯ ಪದವೀಧರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಲು ಜಿಲ್ಲಾಡಳಿತ ಸಜ್ಜಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಎಂ.ಆರ್.ರವಿಕುಮಾರ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**